**ಪ್ರ ದ ನ್ಯಾ ದಂಡಾಧಿಕಾರಿಗಳ ನ್ಯಾಯಾಲಯ, ಕುಶಾಲನಗರ**

**ಸಿ ಸಿ ನಂಃ 525/20**

ಸಾಕ್ಷಿಯ ಹೆಸರುಃ ಗೋಪಾಲ
ತಂದೆ /ಗಂಡನ ಹೆಸರು ಃ ತೋಪಯ್ಯ
ವಯಸ್ಸು ಃ 65
ಉದ್ಯೋಗ ಃ ಕೂಲಿ ಕೆಲಸ
ವಾಸ ಸ್ಥಳ ಃ ಕುಶಾಲನಗರ.

ಪ್ರಾಸಾ2

ಚಾಸಾ 2

**ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಿ ಪ್ರಮಾಣೀಕರಿಸಿದ ದಿಃ 07.11.2024**

**ಮುಖ್ಯ ವಿಚಾರಣೆಃ ಎ ಪಿ ಪಿ ಯವರಿಂದ**

ನನಗೆ ಆರೋಪಿ ಪರಿಚಯ ಇರುವುದಿಲ್ಲ. ಈ ಕೇಸಿನ ಬಗ್ಗೆ ನನಗೇನು ಗೊತ್ತಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೆ ಪಂಚನಾಮೆಯನ್ನು ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಯು ಮಹಜರನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರ ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿದ್ದು , ಸಾಕ್ಷಿಯ ಸಹಿಯನ್ನು ನಿಪಿ-2 ಬಿ ಎಂದು ಗುರುತಿಸಲಾಯಿಉತು. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ 4 ಎಂದು ಗುರುತಿಸಲಾಯಿತು. ನಿಪಿ-2 ಕ್ಕೆ ಸುಮಾರು ಒಂದು ವರ್ಷದ ಹಿಂದೆ ನನ್ನ ಸ್ವಂತ ಕೆಲಸದ ನಿಮಿತ್ತ ಕುಶಾಲನಗರ ಪೊಲೀಸ್ ಠಾಣೆಗೆ ಹೋದಾಗ ಸಹಿ ಮಾಡಿರುತ್ತೇನೆ ಮತ್ತು ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ ಮತ್ತು ಪೊಲೀಸರು ಸಹ ಓದಿ ತಿಳಿಸಿರುವುದಿಲ್ಲ.

(ಸಾಕ್ಷಿಯು ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಕೋರಿರುತ್ತಾರೆ. ವಾದ ವಿವಾದ ಆಲಿಸಿದ್ದೇನೆ. ದಾಖಲೆಗಳನ್ನು ಪರಿಶೀಲಿಸಿದೆ. ಅನುಮತಿಸಿದೆ.)

ಪಾಟಿ ಸವಾಲುಃ ಮಾನ್ಯ ಎಪಿಪಿ ಯವರಿಂದ

ದಿಃ **25.01.2020** ರಂದು ನಾನು ಮನೆಯಲ್ಲಿ ಇರುವಾಗ ಬೆಳಗ್ಗೆ ಸುಮಾರು **11.00** ಗಂಟೆ ನಮ್ಮ ಪಕ್ಕದ ನಿವಾಸಿ ಯಾದ ಆರೋಪಿಯ ಮನೆಯಲ್ಲಿ ಕಿರುಚಾಡಿದ ಶಬ್ದ ಕೇಳಿ ನಾನು ಮತ್ತು ಚಾಸಾ **3** ರವರು ಹೋಗಿ ನೋಡಿಲಾಗಿ ಚಾಸಾ **1** ರವರು ಆರೋಪಿಯ ಮನೆಯಲ್ಲಿದ್ದು ಆರೋೀಪಿ ಚಾಸಾ **1** ರವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ಹಲ್ಲೆ ಮಾಡುತ್ತಿದ್ದರು ಎಂದರೆ ಸರಿಯಲ್ಲ**.** ನಂತರ ನಾವುಗಳು ಸಮಾಧಾನ ಪಡಿಸಿ ಚಾಸಾ 1 ರವರನ್ನು ಅವರ ಅಕ್ಕ ಚಾಸಾ 5 ರವರ ಮನೆಗೆ ಕಳುಹಿಸಿ ಕೊಟ್ಟೆವು ಎಂದರೆ ಸರಿಯಲ್ಲ. ನಂತರ ಈ ಬಗ್ಗೆ ಚಾಸಾ 5 ರವರು ಪೋಲಿಸ ಠಾಣೆಯಲ್ಲಿ ದೂರು ದಾಖಲಪಿರುವ ವಿಚಾರ ತಿಳಿದಿರುತ್ತದೆ ಎಂದರೆ ಸರಿಯಲ್ಲ. ನಂತರ ಅದೇ ದಿನ ಪೋಲಿಸರು ಕೃತ್ಯ ಸ್ಥಳಕ್ಕೆ ಬಂದಾಗ ನಾನು ಹಾಜರಿದ್ದು ಸ್ಥಳದಲ್ಲಿ ತಯಾರಿಸಿದ ಮಹಜರಿಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈಗ ಓದಿ ಕೇಳಿಸಿಕೊಂಡ ನಿಪಿ**-4** ರಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ**.** ಆರೋಪಿಯೊಂದಿಗೆ ರಾಜಿಯಾಗಿರುತ್ತೇನೆ ಎಂದರೆ ಸರಿಯಲ್ಲ**.** ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ**.**

ಪಾಟೀ ಸವಾಲುಃ ಇಲ್ಲ

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ)

ಓದಿ ಹೇಳಿ ಕೇಳಿ ಸರಿ ಇದೆ.

ಸಹಿ/-

ಪ್ರ ದ ನ್ಯಾ ದಂ, ಕುಶಾಲನಗರ.